# ದಿನಾಂಕ: 30-07-2010ರಂದು ಅಪರಾಹ್ನ:12-30 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀಮತಿ ಕಾಮಾಕ್ಷಿರಾಜು,

ಆಧ್ಯಕ್ಷರು,

ಜಿಲ್ಲಾ ಪಂಚಾಯತ್, ಹಾಸನ.

ಹಾಜರಿ: 48

ಗೈರು ಹಾಜರಿ: 10

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ವಿಧಾನ ಸಭೆ ಸದಸ್ಯರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು, ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ದಿನಾಂಕ: 20-02-2010ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ. | ದಿ: 20-02-2010ರಂದು ನಡೆದ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರಾದ ಶ್ರೀಮತಿ ಕಾಮಾಕ್ಷಿರಾಜುರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು. | ದಿನಾಂಕ: 20-02-2010ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅಂಗೀಕರಿಸಿತು. |
| 2 | ದಿನಾಂಕ: 13-04-2010 ಮತ್ತು 14-07-2010 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ | ದಿನಾಂಕ: 13-04-2010 ಮತ್ತು 14-07-2010ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಕಾಮಾಕ್ಷಿರಾಜುರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪಶೆಟ್ಟಿರವರು ಅನುಮೋದಿಸಿದರು. | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ ದಿನಾಂಕ: 13-04-10 ಮತ್ತು 14-07-2010 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ಜಿಲ್ಲೆಗೆ 12ನೇ ಹಣಕಾಸು ರಸ್ತೆ ಅಭಿವೃದ್ಧಿ ಮತ್ತು ಕಟ್ಟಡಗಳ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿದ್ದು, ಹಣ ಬಿಡುಗಡೆಯಾಗಿರುವುದಿಲ್ಲ. ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮುಖ್ಯ ಯೋಜನಾಧಿಕಾರಿಯವರು ಮಾತನಾಡುತ್ತಾ, 2008-09ನೇ ಸಾಲಿನಲ್ಲಿ 12ನೇ ಹಣಕಾಸು ಯೋಜನೆಯಡಿ ನಿಗದಿಯಾದ ಅನುದಾನಕ್ಕೆ ಸರ್ಕಾರದ ನಿರ್ದೇಶನದಂತೆ ಶೇ.25ರಷ್ಟು ಹೆಚ್ಚುವರಿಯಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಸದರಿ ಕಾಗಮಾರಿಗಳಿಗೆ ಅನುದಾನ ಬಿಡುಗಡೆಯಾಗಬೇಕಾಗಿರುತ್ತದೆ ಹಾಗೂ 2009-10ನೇ ಸಾಲಿಗೆ ಸರ್ಕಾರದಿಂದ ಸದರಿ ಯೋಜನೆಯಡಿ ರೂ.596.66ಲಕ್ಷಗಳ ಅನುದಾನ ನಿಗದಿಯಾಗಿದ್ದು, ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಮಲೆನಾಡು ಪ್ರದೇಶದಲ್ಲಿ ಮರಳು ಸಾಗಾಣಿಕೆಯಿಂದ ರಸ್ತೆಗಳು ಹಾಳಾಗಿರುತ್ತವೆ. ಆದ್ದರಿಂದ ಮಳೆಗಾಲ ಕಳೆಯುವವರೆಗೆ ಮರಳು ಸಾಗಾಣಿಕೆಯನ್ನು ನಿಲ್ಲಿಸಲು ಕ್ರಮ ವಹಿಸಬೇಕೆಂದು ಮತ್ತು ಸಕಲೇಶಪುರ ತಾಲ್ಲೂಕು ನಿಡಿಗೆರೆ ಗ್ರಾಮದಲ್ಲಿ ಬಹಿರಂಗವಾಗಿ ಹರಾಜು ಮಾಡಿದಲ್ಲಿ ಸರ್ಕಾರಕ್ಕೆ ಸುಮಾರು ರೂ.50.00ಲಕ್ಷಗಳ ಆದಾಯವಿದೆ. ಆದರೆ, ಅಕ್ರಮವಾಗಿ ಮರಳು ಸಾಗಾಣಿಕೆಯನ್ನು ಮಾಡುತ್ತಿದ್ದು, ಸರ್ಕಾರಕ್ಕೆ ನಷ್ಟವುಂಟುಮಾಡುತ್ತಿರುವುದರಿಂದ, ಮರಳು ಸಾಗಾಣಿಕೆಯನ್ನು ನಿಲ್ಲಿಸುವಂತೆ ಗ್ರಾಮಸ್ಥರು ಧರಣಿಯನ್ನು ನಡೆಸುತ್ತಿದ್ದಾರೆ. ಆದ್ದರಿಂದ, ಈ ಬಗ್ಗೆ ಕೂಡಲೇ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ಮರಳು ಸಾಗಾಣಿಕೆಯನ್ನು ಬಿಗಿ ಮಾಡುವ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು ಮತ್ತು ಈ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಯವರಿಗೆ ಮನವಿಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. | |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ದಿನಾಂಕ: 24-07-2010ರಂದು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ತ್ರೈಮಾಸಿಕ ಕೆ.ಡಿ.ಪಿ ಸಭೆಯಲ್ಲಿಯೂ ಸಹ ಮರಳು ಸಾಗಾಣಿಕೆಯ ಬಗ್ಗೆ ಸಮಗ್ರವಾಗಿ ಚರ್ಚಿಸಲಾಗಿದೆ. ಮಾನ್ಯ ಸಚಿವರು ಸಹ ಮರಳು ಸಾಗಾಣಿಗೆ ನಿರ್ಬಂಧ ಹಾಕುವಂತೆ ಸೂಚನೆ ನೀಡಿರುತ್ತಾರೆ. ಈ ಕಾರ್ಯಕ್ಕೆ ಮಾನ್ಯ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ಪ್ರಾದೇಶಿಕ ಸಾರಿಗೆ ಅಧಿಕಾರಿ, ತಹಸೀಲ್ದಾರ್ ರವರ ಸಹಕಾರವನ್ನು ಪಡೆದುಕೊಂಡು ಅಕ್ರಮ ಮರಳು ಸಾಗಾಣಿಕೆ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು. | |
| 3 | ದಿನಾಂಕ: 13-04-2010 ಮತ್ತು 17-07-2010ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ | ದಿನಾಂಕ: 13-04-2010 ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎ.ಇ.ಚಂದ್ರಶೇಖರ್ ಉ: ಅಣತಿ ಶೇಖರಣ್ಣರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಸಭೆ ನಡವಳಿಗಳನ್ನು ಅನುಮೋದಿಸಿದರು.<br>ಮತ್ತು 17-07-2010ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎಸ್.ದ್ಯಾವೇಗೌಡ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸಿ.ಎನ್. ಬಾಲಕೃಷ್ಣರವರು ಸಭೆ ನಡವಳಿಗಳನ್ನು ಅನುಮೋದಿಸಿದರು. | ಸಮಗ್ರ ಚರ್ಚೆಯ ನಂತರ ದಿ: 13-04-10 ಮತ್ತು 17-07-10 ರಂದು ನಡೆದ ಸಾಮಾನ್ಯ ಸ್ಥಾಯಿ ಸಮತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 4 | ದಿನಾಂಕ: 09-04-2010 ಮತ್ತು 13-07-2010ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿ: 09-04-2010 ಮತ್ತು 13-04-2010ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಮಿತಿಯ ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಆರ್.ನೀಲಪ್ಪರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಯು.ಕೆ.ಶಿವನಂಜಪ್ಪರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಎ.ಇ.ಚಂದ್ರಶೇಖರ್ ರವರು ಮಾತನಾಡುತ್ತಾ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಗ್ರೂಪ್-ಡಿ ನೌಕರರು ಇಲ್ಲದೆ, ವೈದ್ಯರುಗಳೇ ಎಲ್ಲಾ ಕೆಲಸಗಳನ್ನು ನಿರ್ವಹಿಸುವಂತಾಗಿದೆ. ಆದ್ದರಿಂದ ಗ್ರೂಪ್-ಡಿ ನೌಕರರುಗಳನ್ನು ನೇಮಕ ಮಾಡ ಬೇಕೆಂದು ಕೋರಿದರು. ಮತ್ತು ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಮತ್ತು ಚಿಕೂನ್ ಗುನ್ಯಾ ರೋಗಗಳ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. ಸಭೆಯಲ್ಲಿ ಪ್ರಸ್ತಾಪಿಸಿದ ವಿಷಯಗಳ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಹಾಗೂ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಿಳಿಸಲಾಯಿತು.<br>ಹಾಗೂ ದಿ: 09-04-2010 ಮತ್ತು 13-07-2010ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ನಿಯಂತ್ರಣಕ್ಕೆ ಅವಶ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಮತ್ತು ಚಿಕೂನ್ ಗುನ್ಯ ರೋಗಗಳು ಹೆಚ್ಚಾಗಿ ಕಂಡುಬರುತ್ತಿದೆ. ಸರ್ಕಾರಿ ಆಸ್ಪತ್ರೆಯಲ್ಲಿ ಉತ್ತಮ ಸೌಲಭ್ಯವಿಲ್ಲದಿರುವುದರಿಂದ, ರೋಗಿಗಳು ಚಿಕಿತ್ಸೆ ಪಡೆಯಲು ಖಾಸಗಿ ಆಸ್ಪತ್ರೆಗೆ ಹೋಗುತ್ತಿದ್ದು, ಪ್ರತಿ ರೋಗಿಗೂ ರೂ.50000/- ದಿಂದ ರೂ.75000/- ಗಳವರೆಗೆ ಖರ್ಚಾಗುತ್ತಿದ್ದು, ಇದರಿಂದ ಬಡವರಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ ಜಿಲ್ಲೆಯಲ್ಲಿ ರೋಗಗಳು ಹರಡದಂತೆ ನಿಯಂತ್ರಕ್ಕೆ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಕಳೆದ 2008-09ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆಗಳಿಗೆ ಗ್ರೂಪ್-ಡಿ ನೌಕರರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿತ್ತು. ಆದರೆ ಮಂಡ್ಯ ಜಿಲ್ಲೆಯಲ್ಲಿ ಹಿಂದೆ ಕೆಲಸ ನಿರ್ವಹಿಸುತ್ತಿದ್ದ ಗ್ರೂಪ್-ಡಿ ನೌಕರರನ್ನೇ ಮುಂದುವರೆಸಿದ್ದಾರೆ. ಹಾಸನ ಜಿಲ್ಲೆಯಲ್ಲಿ ಸದರಿ ಗ್ರೂಪ್-ಡಿ ನೌಕರರನ್ನು ಸೇವೆಯಿಂದ ವಜಾಗೊಳಿಸಿದ್ದು, ಪುನಃ ನೇಮಕ ಮಾಡಿರುವುದಿಲ್ಲ. ಆದ್ದರಿಂದ ಹಾಸನ ಜಿಲ್ಲೆಯಲ್ಲಿಯೂ ಸಹ ಹಿಂದೆ ಕೆಲಸ ನಿರ್ವಹಿಸುತ್ತಿದ್ದ ಗ್ರೂಪ್-ಡಿ ನೌಕರರನ್ನೇ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಕ್ರಮ ವಹಿಸ ಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಪ್ರೌಢಶಾಲೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಗ್ರೂಪ್-ಡಿ ನೌಕರರನ್ನು ನೇಮಕ ಮಾಡಲು ಲೆಕ್ಕಶೀರ್ಷಿಕೆಯಲ್ಲಿ ಅನುದಾನ ಲಭ್ಯವಿದ್ದು, ಗ್ರೂಪ್-ಡಿ ನೌಕರರನ್ನು ನೇಮಕ ಮಾಡುವ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹಾಸನ ಜಿಲ್ಲೆಯಲ್ಲಿಯೂ ಸಹ ಪ್ರೌಢಶಾಲೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಗ್ರೂಪ್-ಡಿ ನೌಕರರನ್ನು ನೇಮಕ ಮಾಡಲು ಕ್ರಮ ವಹಿಸಲಾಗುವುದೆಂದು ವಿವರ ನೀಡಿದರು. | |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಸಂಪೂರ್ಣ ಸ್ವಚ್ಛತಾ ಆಂದೋಲನಾ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಸ್ವಾಗತಾರ್ಹ ವಿಷಯವಾಗಿದೆ. ಆದರೆ, ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಸರ್ವ ಕುಟುಂಬ ಸಮೀಕ್ಷಾ ಪಟ್ಟಿಯಲ್ಲಿ ಬಿ.ಪಿ.ಎಲ್. ಕುಟುಂಬ ಮತ್ತು ಬಿ.ಪಿ.ಎಲ್ ಪಡಿತರ ಚೀಟಿ ಇದ್ದರೆ ಸಾಕೆಂದು ತಿಳಿಸಿರುತ್ತಾರೆ. ಗ್ರಾಮಗಳಲ್ಲಿ ಸರ್ವ ಕುಟುಂಬ ಸಮೀಕ್ಷಾ ಪಟ್ಟಿಯಲ್ಲಿ ಬಿ.ಪಿ.ಎಲ್. ಕುಟುಂಬ ಮತ್ತು ಬಿ.ಪಿ.ಎಲ್ ಪಡಿತರ ಚೀಟಿ ಇಲ್ಲದವರು ಬಹಳ ಬಡವರಾಗಿರುತ್ತಾರೆ. ಅಂತಹ ಕುಟುಂಬದವರು ಶೌಚಾಲಯ ಕಟ್ಟಿಕೊಳ್ಳಲು ಮುಂದೆ ಬಂದಲ್ಲಿ ಅಂತಹವರಿಗೆ ಸರ್ಕಾರದಿಂದ ನೀಡುವ ರೂ.3000/-ಗಳ ಸಹಾಯಧನವನ್ನು ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿ ಸಂಪೂರ್ಣ ಸ್ವಚ್ಛತಾ ಆಂದೋಲನಾ ಕಾರ್ಯಕ್ರಮಕ್ಕಾಗಿ ಬಿ.ಪಿ.ಎಲ್ ಕುಟುಂಬಗಳ ಆಯ್ಕೆಗೆ ಇರುವ ಮಾನದಂಡಗಳು ಸಮರ್ಪಕವಾಗಿರುವುದಿಲ್ಲ. ಅಲ್ಲದೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ನಡೆಸಿರುವ ಸರ್ವ ಕುಟುಂಬ ಸಮೀಕ್ಷೆಯು ಸಹ ಸಮರ್ಪಕವಾಗಿರುವುದಿಲ್ಲ. ಆದ್ದರಿಂದ ಫಲಾನುಭವಿಗಳ ಆಯ್ಕೆಯನ್ನು ಸಮರ್ಪಕವಾಗಿ ನಡೆಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪ್ರೇಮಾನಿಂಗಪ್ಪರವರು ಮಾತನಾಡುತ್ತಾ, ಪ್ರತಿಯೊಂದು ಗ್ರಾಮಗಳಿಗೂ ಅಂಗನವಾಡಿ ಕಾರ್ಯಕರ್ತೆಯರ ಖಾತೆಗೆ ಗ್ರಾಮಗಳ ಸ್ವಚ್ಛತೆಗೆ ರೂ.10000/-ಗಳನ್ನು ಬಿಡುಗಡೆ ಮಾಡಲಾಗಿದ್ದು, 2 ವರ್ಷಗಳಿಂದ ಸದರಿ ಅನುದಾನವನ್ನು ಸಮರ್ಪಕವಾಗಿ ವಿನಿಯೋಗ ಮಾಡಿರುವುದಿಲ್ಲ. ಈಗ ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಮತ್ತು ಚಿಕೂನ್ ಗುನ್ಯಾ ರೋಗಗಳು ವ್ಯಾಪಕವಾಗಿ ಹರಡುತ್ತಿದ್ದು, ಅವುಗಳ ನಿಯಂತ್ರಣ ಮಾಡಲು ಸದರಿ ಅನುದಾನವನ್ನು ವಿನಿಯೋಗಿಸುವಂತೆ ಗ್ರಾಮ ಪಂಚಾಯಿತಿಗಳಿಗೆ ಮತ್ತು ಅಂಗನವಾಡಿ ಕಾರ್ಯಕರ್ತೆಯರಿಗೆ ಜಿಲ್ಲಾ ಪಂಚಾಯಿತಿಯಿಂದ ಸೂಕ್ತ ನಿರ್ದೇಶನ ನೀಡ ಬೆಕೆಂದು ಕೋರಿದರು. | |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

ಮಾನ್ಯ ಸದಸ್ಯರಾದ ಶ್ರೀ ರಾಜಶೇಖರಪ್ಪರವರು ಮಾತನಾಡುತ್ತಾ, ಜಾವಗಲ್ ಗ್ರಾಮವು ರಾಷ್ಟ್ರೀಯ ಹೆದ್ದಾರಿಯಲ್ಲಿದ್ದು, ಹೋಬಳಿ ಕೇಂದ್ರವಾಗಿರುವುದರಿಂದ, ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಒಂದು ಶವಾಗಾರದ ಅವಶ್ಯಕತೆಯಿದ್ದು, ಅಲ್ಲಿಗೆ ಪ್ರಸಕ್ತ ಸಾಲಿನಲ್ಲಿ ಒಂದು ಶವಾಗಾರವನ್ನು ನಿರ್ಮಾಣಕ್ಕೆ ಅವಶ್ಯ ಅನುದಾನ್ನು ಬಿಡುಗಡೆ ಮಾಡಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಜಿ.ಟಿ.ಪುನೀತ್ ಕೃಷ್ಣಮೂರ್ತಿಯವರು ಮಾತನಾಡುತ್ತಾ, ಮಲ್ಲಿಪಟ್ಟಣದಲ್ಲಿ ವಾಂತಿ ಬೇದಿ ರೋಗದಿಂದ 32 ಜನರು ಅರಕಲಗೂಡು ತಾಲ್ಲೂಕು ಆಸ್ಪತ್ರೆಗೆ ದಾಖಲಾಗಿದ್ದಾರೆ. ಹಾಸನ ಜಿಲ್ಲಾ ಆಸ್ಪತ್ರೆಗೂ ಸಹ ಇಬ್ಬರು ರೋಗಿಗಳು ಚಿಕಿತ್ಸೆ ಪಡೆಯಲು ದಾಖಲಾಗಿದ್ದಾರೆ. ಅಲ್ಲದೆ, ಚೆನ್ನಯ್ಯ ಎಂಬ ರೋಗಿಯು ಆಸ್ಪತ್ರೆಯಿಂದ ಬಿಡುಗಡೆಯಾದ ನಂತರ ಮರಣಹೊಂದಿರುತ್ತಾರೆ. ಇದಕ್ಕೆ ಏನು ಕಾರಣ ಎಂಬ ಬಗ್ಗೆ ಪರಿಶೀಲನೆ ನಡೆಸಲಾಗಿದೆಯೇ? ಎಂಬ ಕುರಿತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ವಿವರ ನೀಡಬೇಕೆಂದು ಕೋರಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಮಲ್ಲಿಪಟ್ಟಣ ಗ್ರಾಮಕ್ಕೆ ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ. ಅಲ್ಲಿ ಕುಡಿಯುವ ನೀರು ಸ್ವಚ್ಛವಿಲ್ಲದ ಕಾರಣ, ಕರುಳು ಬೇನೆಯಿಂದ ವಾಂತಿ ಬೇದಿ ಉಂಟಾಗಿರುತ್ತದೆ ಮತ್ತು ಒಬ್ಬರಿಗೆ ಕಾಲರಾ ಇರುವುದು ದೃಡಪಟ್ಟಿರುತ್ತದೆ. ಆದ್ದರಿಂದ ಸದರಿ ಗ್ರಾಮದ ರೋಗಿಗಳಿಗೆ ಕಾಲರಾ ರೋಗದ ಅನುಮಾನದಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಅಲ್ಲದೆ ಚೆನ್ನಯ್ಯ ಎಂಬ ರೋಗಿಗೆ ಚಿಕಿತ್ಸೆ ನೀಡಿ ಖಾಯಿಲೆ ಗುಣವಾಗಿದೆ ಎಂದು ಕಂಡುಬಂದ ನಂತರ ಅವರನ್ನು ಬಿಡುಗಡೆ ಮಾಡಲಾಗಿದೆ ಎಂದು ವಿವರ ನೀಡಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಯವರಿಂದ ವಿವರಣೆ ಪಡೆಯಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಸಕಲೇಶಪುರ ತಾಲ್ಲೂಕು ಕ್ರಾಫರ್ಡ್ ಆಸ್ಪತ್ರೆಯಲ್ಲಿ ವೈದ್ಯರು ಇರುವುದಿಲ್ಲ ಮತ್ತು ಆಸ್ಪತ್ರೆಯಲ್ಲಿ ಸ್ವಚ್ಛತೆಯೂ

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ಸಹ ಇರುವುದಿಲ್ಲ. ಈ ಬಗ್ಗೆ ಅನೇಕ ಬಾರಿ ಅಧಿಕಾರಿಗಳ ಗಮನವನ್ನು ಸೆಳೆಯಲಾಗಿದೆ. ಆದರೂ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.<br>ಮಾನ್ಯ ಸದಸ್ಯರಾದ ಶ್ರೀ ಎ.ಇ.ಚಂದ್ರಶೇಖರ್ ರವರು ಮಾತನಾಡುತ್ತಾ, ಕೆಲವು ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳನ್ನು ಹೊರಗಡೆ ಔಷಧಿ ಅಂಗಡಿಗಳಲ್ಲಿ ಖರೀದಿಸಲು ಚೀಟಿಯನ್ನು ನೀಡುತ್ತಿರುವುದನ್ನು ಗಮನಿಸಲಾಗಿದೆ. ಈ ಬಗ್ಗೆಯೂ ಸಹ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಹಾಸನ ತಾಲ್ಲೂಕು ಚಿಕ್ಕಹೊನ್ನೇನಹಳ್ಳಿಯಲ್ಲಿ ದಾವಣಗೆರೆಯ ಸರ್ಕಾರೇತರ ಸಂಸ್ಥೆಯವರು ಪ್ರತಿಯೊಬ್ಬರಿಗೂ ಟೈಫಾಯಿಡ್ ಲಸಿಕೆ ಹಾಕಲು ರೂ.100.00ರಂತೆ ಪಡೆದಿರುವ ಘಟನೆಯು ನಡೆದಿದ್ದು, ಈ ಬಗ್ಗೆ ಕ್ರಮ ಪರಿಶೀಲಿಸಿ ಕ್ರಮ ವಹಿಸಲಾಗಿದೆಯೇ? ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಉತ್ತರಿಸುತ್ತಾ, ಗ್ರಾಮಕ್ಕೆ ತೆರಳಿ ಪರಿಶೀಲಿಸಿ ಕ್ರಮ ವಹಿಸಲಾಗಿದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಅರಕಲಗೂಡು ತಾಲ್ಲೂಕು ಕೇರಳಾಪುರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಎಕ್ಸರೇ ಯಂತ್ರವನ್ನು ಅಳವಡಿಸಲಾಗಿರುತ್ತದೆ. ಆದರೆ ಸದರಿ ಯಂತ್ರವನ್ನು ನಿರ್ವಹಿಸಲು 35 ಕೆ.ವಿ ವಿದ್ಯುತ್ ಅವಶ್ಯಕತೆಯಿರುತ್ತದೆ. ಆದ್ದರಿಂದ ಅವಶ್ಯ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಚೆಸ್ಕಾಂ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು. | |
| 5 | ದಿನಾಂಕ: 14-07-2010ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ: 14-07-2010ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀಮತಿ ನಂಜಮ್ಮ ಉ: ಕಮಲಮ್ಮ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಕುಮಾರಸ್ವಾಮಿರವರು ನಡವಳಿಗಳನ್ನು ಅನುಮೋದಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ದಿ: 14-07-2010ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| 6 | ದಿನಾಂಕ: 13-07-2010ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ. | ದಿನಾಂಕ: 13-07-2010ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹೆಚ್.ವೈ.ಚಂದ್ರಶೇಖರ್ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸಿದ್ದೇಶ್ವರ (ತಮ್ಮಯ್ಯ) ರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ರಾಜಶೇಖರಪ್ಪರವರು ಮಾತನಾಡುತ್ತಾ, ಜಾವಗಲ್ ನಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಕಟ್ಟಡವಿದ್ದು, ವಿದ್ಯಾರ್ಥಿ ನಿಲಯಕ್ಕೆ ಕಾಂಪೌಂಡ್ ನಿರ್ಮಾಣ ಮಾಡಲು ಪ್ರಸಕ್ತ ಸಾಲಿಗೆ ರೂ.1.00ಲಕ್ಷಗಳ ಅನುದಾನವನ್ನು ನೀಡಬೇಕೆಂದು ಕೋರಿದರು.<br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗಳ ವತಿಯಿಂದ ಅನುದಾನವನ್ನು ಪಡೆದು ಖಾಸಗಿಯವರು ನಡೆಸುತ್ತಿರುವ ವಿದ್ಯಾರ್ಥಿನಿಲಯಗಳು ಸಮರ್ಪಕವಾಗಿ ನಡೆಯುತ್ತಿವೆಯೇ? ಎಂಬ ಬಗ್ಗೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡಸಿ ನಂತರ ಅನುದಾನವನ್ನು ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮುಂದುವರೆದು ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ಮಕ್ಕಳಿಗೆ ಮದ್ಯಾಹ್ನದ ಊಟವನ್ನು ಶಿಕ್ಷಣ ಇಲಾಖೆಯಿಂದ ನೀಡುವ ಬಿಸಿಯೂಟವನ್ನು ಮಾಡುತ್ತಾರೆ. ಆದರೆ, ಸದರಿ ಮಕ್ಕಳಿಗೂ ವಿದ್ಯಾರ್ಥಿನಿಲಯದಲ್ಲಿ ಊಟವನ್ನು ನೀಡಿರುವುದಾಗಿ ಮತ್ತು ಶನಿವಾರ ಹಾಗೂ ಬಾನುವಾರದಂದು ವಿದ್ಯಾರ್ಥಿಗಳು ಸ್ವಂತ ಊರಿಗೆ ತೆರಳಿದ್ದರೂ ಸಹ ನಿಲಯ ಮೇಲ್ವಿಚಾರಕರು ಲೆಕ್ಕ ನೀಡುತ್ತಿದ್ದಾರೆ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ತಿಳಿಸಿದರು ಮತ್ತು ಹಾಸನ ನಗರಕ್ಕೆ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಅವಶ್ಯಕತೆಯಿರುವುದರಿಂದ, ಬೇರೆ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ವಿದ್ಯಾರ್ಥಿನಿಲಯಗಳನ್ನು ಪ್ರಾರಂಭ ಮಾಡಿ ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು. | ಸಮಗ್ರ ಚರ್ಚೆಯ ನಂತರ ದಿನಾಂಕ: 17-02-2010ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು.<br>ಹಾಸನ ನಗರಕ್ಕೆ ವಿಜ್ಞಾನ ವಿಷಯ ಓದಲು ಗ್ರಾಮೀಣ ಪ್ರದೇಶದ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದು, ಅವರಿಗೆ ಬಸ್ ಸೌಕರ್ಯ ಸಮರ್ಪಕವಾಗಿಲ್ಲದ ಕಾರಣ ವಿದ್ಯಾಬ್ಯಾಸ ಮುಂದುವರೆಸಲು ಅನುಕೂಲ ವಾಗುವಂತೆ ತಾಲ್ಲೂಕು ಕೇಂದ್ರ ಮತ್ತು ಇತರೆ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಬಾಕಿ ಉಳಿಯುವ ಸ್ಥಾನಗಳಿಗನುಗುಣವಾಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭ ಮಾಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಖಾಸಗಿಯವರು ನಡೆಸುತ್ತಿರುವ ಅನುದಾನಿತ ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ ಸಮರ್ಪಕವಾಗಿ ನಡೆಯುತ್ತಿವೆಯೇ? ಎಂಬ ಬಗ್ಗೆ ಪರಿಶೀಲನೆ ನಡೆಸಲು ಕಾರ್ಯಕ್ರಮವನ್ನು ಹಾಕಿಕೊಳ್ಳಲಾಗಿದೆ ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ Bio metric ವ್ಯವಸ್ಥೆಯನ್ನು ಕಲ್ಪಿಸಿಕೊಂಡು ಬೆಳಿಗ್ಗೆ ಮತ್ತು ಸಂಜೆ ಹೆಬ್ಬೆಟ್ಟಿನ ಸಹಿಯನ್ನು ಪಡೆಯಲು ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು.<br><br>ಮುಂದುವರೆದು ತಾಲ್ಲೂಕು ಹಾಗೂ ಇತರೆ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಬಗ್ಗೆ ಸಂಬಂಧಪಟ್ಟ ಇಲಾಖೆಯ ಮುಖ್ಯಸ್ಥರೊಂದಿಗೆ ಚರ್ಚಿಸಲಾಗುವುದು ಎಂದು ಸಭೆಯ ಗಮನಕ್ಕೆ ತಂದರು.<br><br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕಟ್ಟಡ ನಿರ್ಮಾಣಕ್ಕೆ ರಾಜ್ಯ ಮಟ್ಟದಲ್ಲಿಯೇ ಟೆಂಡರ್ ಕರೆದು, ಪ್ಯಾಕೇಜ್ ಅಡಿಯಲ್ಲಿ ಕಾಮಗಾರಿಗಳನ್ನು ಟೆಂಡರ್ ದಾರರಿಗೆ ನೀಡುತ್ತಿದ್ದಾರೆ. ಆದ್ದರಿಂದ ಕಾಮಗಾರಿಗಳ ಅನುಷ್ಠಾನ ವಿಳಂಬವಾಗಿದೆ ಎಂದು ಸಭೆಯ ಗಮನಕ್ಕೆ ತಂದರು.<br><br>ಮಾನ್ಯ ಜಿಲ್ಲಾ ಪಂಚಾಯತ್ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ಬೇಲೂರು ಪಟ್ಟಣದಲ್ಲಿ ನಿರ್ಮಾಣ ಮಾಡುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಕಟ್ಟಡ ಹಾಗೂ ಹಗರೆಯಲ್ಲಿ ನಿರ್ಮಾಣ ಮಾಡುತ್ತಿರುವ ವಿದ್ಯಾರ್ಥಿನಿಲಯದ ಕಟ್ಟಡ ಕಾಮಗಾರಿಗಳ ಗುಣಮಟ್ಟವು ಉತ್ತಮವಾಗಿರುವುದಿಲ್ಲ ಹಾಗೂ ಕಾಮಗಾರಿಯ ನಿರ್ಮಾಣ ಬಹಳ ವಿಳಂಬವಾಗಿರುತ್ತದೆ. ಆದ್ದರಿಂದ ಈ ಬಗ್ಗೆಯೂ ಸಹ ಪರಿಶೀಲನೆ ನಡೆಸಬೇಕೆಂದು ಕೋರಿದರು.<br><br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕಿನಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲಾ ಕಟ್ಟಡ ಮತ್ತು ವಿದ್ಯಾರ್ಥಿ | |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

<table>
<tr><td></td><td></td><td>ನಿಲಯದ ಕಟ್ಟಡಗಳನ್ನು ಸಮರ್ಮಕವಾಗಿ ನಿರ್ಮಾಣ ಮಾಡುತ್ತಿಲ್ಲ. ರಾಜ್ಯ ಮಟ್ಟದಲ್ಲಿಯೇ ಟೆಂಡರ್ ಕರೆದಿದ್ದು, ಟೆಂಡರಿನಲ್ಲಿ ನಮೂದಿಸಿರುವ ಷರತ್ತುಗಳನ್ನು ಸ್ಥಳೀಯ ಗುತ್ತಿಗೆದಾರರಿಗೆ ಪೂರೈಸಲು ಸಾಧ್ಯವಾಗುವುದಿಲ್ಲ. ಈ ರೀತಿ ಬೇಕೆಂದೇ ಷರತ್ತುಗಳನ್ನು ಹಾಕಿ ಒಬ್ಬರಿಗೇ ಟೆಂಡರ್ ನೀಡಿರುತ್ತಾರೆ. ಇದರಿಂದ ಕಾಮಗಾರಿಗಳು ತ್ವರಿತವಾಗಿ ಅನುಷ್ಠಾನವಾಗುತ್ತಿಲ್ಲ. ಆದ್ದರಿಂದ, ಈ ಬಗ್ಗೆ ಜಿಲ್ಲಾ ಪಂಚಾಯಿತಿ ವತಿಯಿಂದ ಇಲಾಖಾ ಸಚಿವರನ್ನೂ ಸೇರಿಸಿ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.</td><td></td></tr>
<tr><td>7</td><td>2010-11ನೇ ಸಾಲಿನ ಜಿಲ್ಲಾ ಪಂಚಾಯಿತಿಯ ಮುಂಗಡ ಪತ್ರಕ್ಕೆ ಅನುಮೋದನೆ ನೀಡುವ ಬಗ್ಗೆ.</td><td>ಮಾನ್ಯ ಜಿಲ್ಲಾ ಪಂಚಾಯತ್ ಅಧ್ಯಕ್ಷರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ವಿವಿಧ ಇಲಾಖೆಗಳ ಜಿಲ್ಲಾ ಪಂಚಾಯಿತಿ ಯೋಜನೆ ಮತ್ತು ಯೋಜನೇತರ ಕಾರ್ಯಕ್ರಮಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನಕ್ಕೆ ಸಂಬಂಧಿಸಿದಂತೆ, 2010-11ನೇ ಸಾಲಿನ ಆಯವ್ಯಯವನ್ನು ಸಭೆಯ ಅನುಮೋದನೆಗೆ ಮಂಡಿಸಿದರು.<br><br><u>2010-11ನೇ ಸಾಲಿಗೆ ನಿಗದಿಯಾಗಿರುವ ಅನುದಾನದ ವಿವರ</u><br><br>
<table>
<tr><th>ಕ್ರಸಂ</th><th>ವಿವರ</th><th>ನಿಗದಿಪಡಿಸಿರುವ ಒಟ್ಟು ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>1</td><td>ರಾಜ್ಯ ಯೋಜನೆ</td><td>9613.40</td></tr>
<tr><td>2</td><td>ಕೇಂದ್ರ ಯೋಜನೆ</td><td>4502.40</td></tr>
<tr><td></td><td>ಯೋಜನೇತರ</td><td>36056.76</td></tr>
<tr><td></td><td>ಒಟ್ಟು</td><td>50172.56</td></tr>
</table></td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ವಿವಿಧ ಇಲಾಖೆಗಳ ಜಿಲ್ಲಾ ಪಂಚಾಯಿತಿ ಯೋಜನೆ ಮತ್ತು ಯೋಜನೇತರ ಕಾರ್ಯ ಕ್ರಮಗಳಿಗೆ ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವ ಅನುದಾನಕ್ಕೆ ಸಂಬಂಧಿಸಿದಂತೆ, ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಮಂಡಿಸಿದ 2010-11ನೇ ಸಾಲಿನ ಆಯವ್ಯಯವನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು.<br><br><u>2010-11ನೇ ಸಾಲಿಗೆ ನಿಗದಿಯಾಗಿರುವ ಅನುದಾನದ ವಿವರ</u><br><br>
<table>
<tr><th>ಕ್ರ ಸಂ</th><th>ವಿವರ</th><th>ನಿಗದಿಪಡಿಸಿರುವ ಒಟ್ಟು ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>1</td><td>ರಾಜ್ಯ ಯೋಜನೆ</td><td>9613.40</td></tr>
<tr><td>2</td><td>ಕೇಂದ್ರ ಯೋಜನೆ</td><td>4502.40</td></tr>
<tr><td></td><td>ಯೋಜನೇತರ</td><td>36056.76</td></tr>
<tr><td></td><td>ಒಟ್ಟು</td><td>50172.56</td></tr>
</table></td></tr>
</table>

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು | | |
| 1 | ಹಾಸನ ಜಿಲ್ಲೆಯ 8 ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆ ಯಿದ್ದು, ಸಮಸ್ಯೆಯನ್ನು ಪರಿಹರಿಸಲು ಕೇಂದ್ರ ಸರ್ಕಾರದಿಂದ ಅನುದಾನವನ್ನು ಒದಗಿಸಲು ಸರ್ಕಾರವನ್ನು ಕೋರುವ ಬಗ್ಗೆ | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಗೆ ತಪ್ಪದೇ ಕೇಂದ್ರ ಸರ್ಕಾರವರು ಕೇಂದ್ರದ ಪಾಲಿನ ಅನುದಾನವನ್ನು ಬಿಡುಗಡೆ ಮಾಡುತ್ತಾರೆ. ಆದರೆ ರಾಜ್ಯ ಸರ್ಕಾರದವರು ಪ್ರಸಕ್ತ ಸಾಲಿನಲ್ಲಿ ಕುಡಿಯುವ ನೀರಿನ ಯೋಜನೆಗೆ ಯಾವುದೇ ಅನುದಾನವನ್ನು ಲಿಂಕ್ ಪುಸ್ತಕದಲ್ಲಿ ನಿಗದಿಪಡಿಸಿರುವುದಿಲ್ಲವೆಂದು ಆಕ್ಷೇಪವನ್ನು ವ್ಯಕ್ತಪಡಿಸಿದರು.<br>ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ರಾಜ್ಯ ಸರ್ಕಾರದವರು ಗ್ರಾಮೀಣ ಕುಡಿಯುವ ನೀರು ಯೋಜನೆಯನ್ನು ಅನುಷ್ಠಾನ ಮಾಡಲು ಗ್ರಾಮೀಣ ನೀರು ಮತ್ತು ನೈರ್ಮಲ್ಯ ಬೋರ್ಡ್ ಒಂದನ್ನು ರಚನೆ ಮಾಡಿ, ಅದರ ಮೂಲಕವೇ ಎಲ್ಲಾ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಲು ತೀರ್ಮಾನಿಸಿರುವುದು ಸಮರ್ಪಕವಾಗಿರುವುದಿಲ್ಲ. ಕೇಂದ್ರ ಸರ್ಕಾರದವರು ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರು ಯೋಜನೆಗಳನ್ನು ಜಿಲ್ಲಾ ಪಂಚಾಯಿತಿ ವತಿಯಿಂದ ಅನುಷ್ಠಾನ ಮಾಡಲು ಬಿಡುಗಡೆ ಮಾಡುವ ಅನುದಾದಲ್ಲಿ ಪೂರ್ಣ ಅನುದಾನವನ್ನು ಜಿಲ್ಲಾ ಪಂಚಾಯಿತಿಗಳಿಗೇ ಬಿಡುಗಡೆ ಮಾಡಬೇಕೆಂದು ರಾಜ್ಯ ಸರ್ಕಾರವನ್ನು ಕೋರುವುದು ಸೂಕ್ತವೆಂದು ಅಭಿಪ್ರಾಯಪಟ್ಟರು ಮತ್ತು ಒಂದು ವೇಳೆ ರಾಜ್ಯ ಸರ್ಕಾರದವರು ಪರಿಗಣಿಸದಿದ್ದಲ್ಲಿ ಮಾನ್ಯ ಮುಖ್ಯ ಮಂತ್ರಿಯವರ ಮನೆಯ ಮುಂದೆ ಧರಣಿ ಮಾಡುವುದು ಅನಿವಾರ್ಯವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ ರೇವಣ್ಣರವರು ಮಾತನಾಡುತ್ತಾ, ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ದಿನಾಂಕ: 10-08-2010ರ ಒಳಗಾಗಿ ರೂ.5.00ಕೋಟಿಗಳನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ, ಹಾಸನ ಜಿಲ್ಲೆಗೆ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಲು ತುರ್ತಾಗಿ ರೂ.5.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ಮತ್ತು ಒಂದು ವೇಳೆ ರಾಜ್ಯ ಸರ್ಕಾರದವರು ಬಿಡುಗಡೆ ಮಾಡದಿದ್ದಲ್ಲಿ ಧರಣಿ ಮಾಡುವುದು ಅನಿವಾರ್ಯವೆಂದು ಅಭಿಪ್ರಾಯಪಟ್ಟರು. | |
| 2 | ವಿಶೇಷ ಘಟಕ ಯೋಜನೆಯಡಿ ಇದುವರೆಗೂ ಅನುದಾನ ಬಿಡುಗಡೆ ಯಾಗದೇ ಇರುವುದರಿಂದ ಅನುದಾನ ಬಿಡುಗಡೆ ಮಾಡಲು ಸರ್ಕಾರಕ್ಕೆ ಮನವಿ ಸಲ್ಲಿಸುವ ಬಗ್ಗೆ | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ.ಶಿವಲಿಂಗೇಗೌಡರವರು ಮಾತನಾಡುತ್ತಾ, ವಿಶೇಷ ಅಭಿವೃದ್ಧಿ ಯೋಜನೆಯಡಿ ವಿಶೇಷ ಘಟಕ ಯೋಜನೆಗೆ ರೂ.119.00ಲಕ್ಷಗಳು ನಿಗದಿಯಾಗಿದ್ದು, ಇಲ್ಲಿಯವರೆಗೆ ಯಾವುದೇ ಅನುದಾನ ಬಿಡುಗಡೆಯಾಗದೇ ಇರುವ ಬಗ್ಗೆ ಆಕ್ಷೇಪವನ್ನು ವ್ಯಕ್ತಪಡಿಸಿದರು. | ಸಭೆಯಲ್ಲಿ ಚರ್ಚಿಸಿದ ನಂತರ, ವಿಶೇಷ ಅಭಿವೃದ್ಧಿ ಯೋಜನೆಯಡಿ ನಿಗದಿಪಡಿಸಿದ ಅನುದಾನ ರೂ.119.00ಲಕ್ಷಗಳನ್ನು ತ್ವರಿತವಾಗಿ ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 3 | ಹೊಸದಾಗಿ ಅಂಗನವಾಡಿ ಕಟ್ಟಡ ನಿರ್ಮಿಸಲು ಹಾಗೂ ದುರಸ್ಥಿಪಡಿಸಲು ಮತ್ತು ಹೊಸದಾಗಿ ಅಂಗನವಾಡಿ ಗಳನ್ನು ತೆರೆಯುವ ಬಗ್ಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸುವ ಬಗ್ಗೆ. | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿ:24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲೆಗೆ ಹೊಸದಾಗಿ ಅಂಗನವಾಡಿ ಕಟ್ಟಡ ನಿರ್ಮಿಸಲು ಹಾಗೂ ದುರಸ್ಥಿಪಡಿಸಲು ಮತ್ತು ಹೊಸದಾಗಿ ಅಂಗನವಾಡಿಗಳನ್ನು ತೆರೆಯುವ ಬಗ್ಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸುವುದು ಸೂಕ್ತವೆಂದು ತಿಳಿಸಿದರು. | ಸಭೆಯಲ್ಲಿ ಚರ್ಚಿಸಿದ ನಂತರ, ಹಾಸನ ಜಿಲ್ಲೆಯಲ್ಲಿ ಹೊಸದಾಗಿ ಅಂಗನವಾಡಿ ಕಟ್ಟಡ ನಿರ್ಮಿಸಲು ಹಾಗೂ ದುರಸ್ಥಿಪಡಿಸಲು ಮತ್ತು ಹೊಸದಾಗಿ ಅಂಗನವಾಡಿಗಳನ್ನು ತೆರೆಯುವ ಬಗ್ಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 4 | ಗ್ರಾಮೀಣ ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವಂತೆ ಕೋರುವ ಬಗ್ಗೆ. | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಈ ಹಿಂದೆ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಗ್ರಾಮೀಣ ರಸ್ತೆಗಳ ದುರಸ್ಥಿಗಾಗಿ ರೂ.50.00ಲಕ್ಷಗಳ ಅನುದಾನ ನೀಡುತ್ತಿದ್ದು, ಈಗ ಯಾವುದೇ ಅನುದಾನವನ್ನು ಗ್ರಾಮೀಣ ರಸ್ತೆ ಅಭಿವೃದ್ಧಿ ನೀಡದೆ ಇರುವುದರಿಂದ, ಕ್ಷೇತ್ರದ ಅಭಿವೃದ್ಧಿಗೆ ತೊಂದರೆಯಾಗಿರುತ್ತದೆ. ಆದ್ದರಿಂದ, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ರೂ.1.50ಕೋಟಿಗಳಿಂದ ರೂ.2.00ಕೋಟಿಗಳವರೆಗೆ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರಕ್ಕೆ ಮನವಿ ಸಲ್ಲಿಸುವುದು ಸೂಕ್ತವೆಂದು ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಅಭಿಪ್ರಾಯಪಟ್ಟರು. | ಸಭೆಯಲ್ಲಿ ಚರ್ಚಿಸಿದ ನಂತರ, ಗ್ರಾಮೀಣ ರಸ್ತೆಗಳ ದುರಸ್ಥಿಗಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ರೂ.1.50 ಕೋಟಿಗಳಿಂದ ರೂ.2.00 ಕೋಟಿಗಳವರೆಗೆ ಅನುದಾನವನ್ನು ಬಿಡುಗಡೆ ಮಾಡಲು ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನು ಮತದಿಂದ ತೀರ್ಮಾನಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| 5 | ಆಲೂಗೆಡ್ಡೆ ಬೆಳೆಗೆ ಪರಿಹಾರವನ್ನು ನೀಡುವ ಬಗ್ಗೆ | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಕಳೆದ ಮೂರು ವರ್ಷದಿಂದ ಹಾಸನ ಜಿಲ್ಲೆಯಲ್ಲಿ ಅಂಗಮಾರಿ ರೋಗದಿಂದ ಆಲೂಗೆಡ್ಡೆ ಬೆಳೆಯು ಸರಿಯಾಗಿ ಬಾರದೆ ರೂ.350.00ಕೋಟಿಗಳಿಂದ ರೂ.400.00ಕೋಟಿಗಳಷ್ಟು ನಷ್ಟವಾಗಿ ರೈತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುತ್ತಾರೆ. ಆದಕಾರಣ ರೈತರಿಗೆ ಶೇ.50ರಷ್ಟು ಪರಿಹಾರ ಧನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯಲ್ಲಿ ಮಂಡಿಸಲಾಯಿತು. | ಸಭೆಯಲ್ಲಿ ಚರ್ಚಿಸಿದ ನಂತರ. ಹಾಸನ ಜಿಲ್ಲೆಯಲ್ಲಿ ಆಲೂಗೆಡ್ಡೆ ಬೆಳೆಯಿಂದ ರೈತರಿಗೆ ನಷ್ಟವುಂಟಾಗಿದ್ದು, ರೈತರಿಗೆ ಶೇ.50ರಷ್ಟು ಪರಿಹಾರ ಧನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 6 | ವಿದ್ಯುತ್ ಇಲಾಖೆಗೆ ಅಗತ್ಯವಿರುವ ಟಿ.ಸಿ. ವಿದ್ಯುತ್ ಕಂಬಗಳು ಹಾಗೂ ಇನ್ನಿತರೆ ಸಲಕರಣೆಗಳನ್ನು ಜಿಲ್ಲೆಗೆ ಒದಗಿಸಲು ಪ್ರಸ್ತಾವನೆ ಸಲ್ಲಿಸುವ ಬಗ್ಗೆ. | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಜಿಲ್ಲೆಯಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ ಅವಶ್ಯವಿರುವ ಟಿ.ಸಿಗಳು, ವಿದ್ಯುತ್ ಕಂಬಗಳು ಮತ್ತು ಇನ್ನಿತರೆ ಸಲಕರಣೆಗಳು ಅವಶ್ಯಕತೆಯಿರುತ್ತವೆ ಮತ್ತು ದಿನಾಂಕ: 24-07-2010ರಂದು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ತ್ರೈಮಾಸಿಕ ಸಭೆಯಲ್ಲಿ ಮಾನ್ಯ ಸಚಿವರು ಜಿಲ್ಲೆಗೆ ಅವಶ್ಯವಿರುವ ಟಿ.ಸಿ ಗಳು ಮತ್ತು ಇತರೆ ಸಲಕರಣೆಗಳ ಬಗ್ಗೆ ಬೇಡಿಕೆ ಪಟ್ಟಿಯನ್ನು ಸಲ್ಲಿಸಿದಲ್ಲಿ ಸರಬರಾಜು ಮಾಡುವ ಬಗ್ಗೆ ಪರಿಶೀಲಿಸಲಾಗುವುದು ಎಂದು ತಿಳಿಸಿರುತ್ತಾರೆ. ಆದ್ದರಿಂದ, ಹಾಸನ ಜಿಲ್ಲೆಗೆ ಅವಶ್ಯಕ ಟಿ.ಸಿ.ಗಳು, ವಿದ್ಯುತ್ ಕಂಬಗಳು ಮತ್ತು ಇನ್ನಿತರೆ ಸಲಕರಣೆಗಳನ್ನು ಸರಬರಾಜು ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ವಿಷಯವನ್ನು ಮಂಡಿಸಿದೆ. | ಸಭೆಯಲ್ಲಿ ಚರ್ಚಿಸಿದ ನಂತರ, ಹಾಸನ ಜಿಲ್ಲೆಗೆ ಅವಶ್ಯಕ ಟಿ.ಸಿ.ಗಳು, ವಿದ್ಯುತ್ ಕಂಬಗಳು ಮತ್ತು ಇನ್ನಿತರೆ ಸಲಕರಣೆಗಳನ್ನು ಸರಬರಾಜು ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 7 | ಜಿಲ್ಲೆಗೆ ಆಶ್ರಯ ಮನೆ ಮತ್ತು ಜನತಾ ಮನೆಗಳನ್ನು ಮಂಜೂರು ಮಾಡುವ ಬಗ್ಗೆ. | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು. | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ ಹಾಸನ ಜಿಲ್ಲೆಗೆ ಆಶ್ರಯ ಮತ್ತು ಜನತಾ ಮನೆಗಳನ್ನು ಮಂಜೂರು ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | | ಜಿಲ್ಲೆಗೆ ಆಶ್ರಯ ಮನೆ ಮತ್ತು ಜನತಾ ಮನೆಗಳು ಅತೀ ಅವಶ್ಯವಿದ್ದು, ಜನಸಂಖ್ಯೆಗನುಗುಣವಾಗಿ ಮನೆಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮಾನ್ಯ ಶಾಸಕರಾದ ಶ್ರೀ ಕೆ.ಎಂ. ಶಿವಲಿಂಗೇಗೌಡರವರು ಮಾತನಾಡುತ್ತಾ, ಸರ್ಕಾರದಿಂದ ಮಂಜೂರು ಮಾಡಿರುವ ಮನೆಗಳು ಯಾವ ಯೋಜನೆಗೆ ಸೇರಿವೆ ಎಂಬ ಬಗ್ಗೆ ಸ್ಪಷ್ಟೀಕರಣ ಪಡೆಯಬೇಕೆಂದು ಮುಖ್ಯ ಯೋಜನಾಧಿಕಾರಿಯವರಿಗೆ ತಿಳಿಸಿದರು.<br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ, ತಾಲ್ಲೂಕುಗಳಿಂದ ಫಲಾನುಭವಿಗಳ ಪಟ್ಟಿಯನ್ನು ಪಡೆದು ಸರ್ಕಾರಕ್ಕೆ ಸಲ್ಲಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮುಖ್ಯ ಯೋಜನಾಧಿಕಾರಿಯವರು ಮಾತನಾಡುತ್ತಾ, ದಿನಾಂಕ: 02-08-2010ರಂದು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ಮನೆಗಳ ಅನುಷ್ಠಾನದ ಬಗ್ಗೆ ಸಭೆಯನ್ನು ಕರೆದಿದ್ದು, ಸಭೆಯಲ್ಲಿ ಸ್ಪಷ್ಟೀಕರಣವನ್ನು ಪಡೆಯುವುದಾಗಿ ವಿವರ ನೀಡಿದರು. | |
| 8 | ನಬಾರ್ಡ್ ಪ್ರೌಢಶಾಲಾ ಹೆಚ್ಚುವರಿ ಕೊಠಡಿಗಳಿಗೆ ಅವಶ್ಯ ಅನುದಾನ ಬಿಡುಗಡೆ ಮಾಡುವಂತೆ ಕೋರುವ ಬಗ್ಗೆ. | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲೆಗೆ ನಬಾರ್ಡ್ ವತಿಯಿಂದ ಹೆಚ್ಚುವರಿ ಕೊಠಡಿಗಳು ಮಂಜೂರಾಗಿದ್ದು, ಸದರಿ ಕೊಠಡಿಗಳನ್ನು ಪೂರ್ಣಗೊಳಿಸಲು ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸಲು ಅಗತ್ಯವಾದ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ವಿಷಯವನ್ನು ಮಂಡಿಸಲಾಯಿತು. | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ ಹಾಸನ ಜಿಲ್ಲೆಗೆ ನಬಾರ್ಡ್ ವತಿಯಿಂದ ಮಂಜೂರಾಗಿರುವ ಹೆಚ್ಚುವರಿ ಕೊಠಡಿಗಳನ್ನು ಪೂರ್ಣ ಗೊಳಿಸಲು ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸಲು ಅಗತ್ಯವಾದ ಅನುದಾನವನ್ನು ಬಿಡುಗಡೆ ಮಾಡು ವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 9 | 2010-11ನೇ ಸಾಲಿಗೆ ಲೆಕ್ಕ ಶೀರ್ಷಿಕೆ 4215 ರಾಜ್ಯ ಮತ್ತು ಕೇಂದ್ರ ವಲಯದಡಿ ಮುಂದುವರೆದ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ, ವಿಶೇಷ ಅಭಿವೃದ್ಧಿ | ಸರ್ಕಾರಿ ಆದೇಶ ಸಂ:ಗ್ರಾಅಪ;26/ಗ್ರಾನೀಸ.2/09, ದಿ:23-04-2010ರಲ್ಲಿ 2009-01ನೇ ಸಾಲಿನಿಂದ 2010-11ನೇ ಸಾಲಿಗೆ ಲೆಕ್ಕ ಶೀರ್ಷಿಕೆ 4215 ರಾಜ್ಯ ಮತ್ತು ಕೇಂದ್ರ ವಲಯದಡಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ, ವಿಶೇಷ ಅಭಿವೃದ್ಧಿ ಯೋಜನೆ (ಡಾ:ನಂಜುಂಡಪ್ಪ ವರದಿ ಆಧಾರಿತ) ಹಾಗೂ ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳನ್ನು ಮುಂದುವರೆಸಿ ಆದೇಶಿಸಲಾಗಿದೆ. ಅದರಂತೆ ಕುಡಿಯುವ ನೀರಿನ ಯೋಜನೆಗಳಿಗಾಗಿ | ಸಭೆಯಲ್ಲಿ ಚರ್ಚಿಸಿದಂತೆ, ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದ್ದು, ಪ್ರಸ್ತಾನೆಯಲ್ಲಿ ವಿವರಿಸಿರುವಂತೆ 2009-10ನೇ ಸಾಲಿನಿಂದ 2010-11ನೇ ಸಾಲಿಗೆ ಮುಂದುವರೆದ ಕುಡಿಯುವ ನೀರಿನ ಕಾಮಗಾರಿಗಳಿಗಾಗಿ ರೂ. 1412.01 ಲಕ್ಷ ಗಳು, ವಿಶೇಷ ಅಭಿವೃದ್ಧಿ ಯೋಜನೆಗಾಗಿ ರೂ.239.77 ಲಕ್ಷಗಳು ಹಾಗೂ |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| | ಯೋಜನೆ (ಡಾ:ನಂಜುಂಡಪ್ಪ ವರದಿ ಆಧಾರಿತ) ಹಾಗೂ ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ | ರೂ.413.10 ಲಕ್ಷಗಳು, ವಿಶೇಷ ಅಭಿವೃದ್ಧಿ ಯೋಜನೆಗಾಗಿ ರೂ. 239.77 ಲಕ್ಷಗಳು, ಹಾಗೂ ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳಿಗಾಗಿ ರೂ.21.30ಲಕ್ಷಗಳ ಮುಂದುವರೆದ ಕಾಮಗಾರಿಗಳ ಪಟ್ಟಿಯನ್ನು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ/ಚನ್ನರಾಯಪಟ್ಟಣರವರು ಸಲ್ಲಿಸಿ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br>ಜಿಲ್ಲೆಯಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆಯಿರುವುದರಿಂದ, ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳುವುದು ಅನಿವಾರ್ಯವಾಗಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ, 2009-10ನೇ ಸಾಲಿನಲ್ಲಿ ತುರ್ತು ಅವಶ್ಯವಿರುವ ಕುಡಿಯುವ ನೀರಿನ 1250 ಕಾಮಗಾರಿಗಳಿಗಾಗಿ ರೂ. 998.91 ಲಕ್ಷಗಳ ಕ್ರಿಯಾ ಯೋಜನೆಗೆ ಈಗಾಗಲೇ ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ನೀಡಲಾಗಿದೆ. ಆದ್ದರಿಂದ, ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವ ಸಂಬಂಧ 1250 ಕಾಮಗಾರಿಗಳನ್ನು ಸೇರ್ಪಡೆಗೊಳಿಸಿ, ಮುಂದುವರೆದ ಕಾಮಗಾರಿಗಳನ್ನು ಒಳಗೊಂಡಂತೆ ಒಟ್ಟು ರೂ.1412.01ಲಕ್ಷಗಳಲ್ಲಿ 2010-11ನೇ ಸಾಲಿಗೆ ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. | ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳಿಗಾಗಿ ರೂ. 21.30 ಲಕ್ಷಗಳ ಕ್ರಿಯಾಯೋಜನೆಗೆ ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರು ಕುಡಿಯುವ ನೀರಿನ ಕಾಮಗಾರಿಗಳ ಅಂದಾಜು ಪಟ್ಟಿಯನ್ನು ಸಿದ್ಧ ಪಡಿಸಿ, ಅನುಮೋದನೆ ಪಡೆದು ಕಾಮಗಾರಿಗಳನ್ನು ಶೀಘ್ರವಾಗಿ ಅನುಷ್ಠಾನಗೊಳಿಸಲು ಸಭೆಯಲ್ಲಿ ಸೂಚಿಸಲಾಯಿತು. |
| 10 | ಹಾಸನ ಜಿಲ್ಲೆಯಲ್ಲಿ ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸುವ ಬಗ್ಗೆ. | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಧ್ಯಕ್ಷರು/ಆ.ಶಾ/287/2010-11 ದಿನಾಂಕ: 24-07-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಪ್ರಸಕ್ತ ಸಾಲಿನಲ್ಲಿ ಹಾಸನ ಜಿಲ್ಲೆಗೆ ಮಳೆಯ ಪ್ರಮಾಣ ತೀವ್ರವಾಗಿ ಕುಂಠಿತವಾಗಿರುವುದರಿಂದ ಕೇವಲ ಶೇಕಡ 10ರಿಂದ 20ರ ಪ್ರಮಾಣದಲ್ಲಿ ಮಳೆಯಾಗಿರುವುದರಿಂದ, ಜಿಲ್ಲೆಯಲ್ಲಿರುವ ಎಲ್ಲಾ ಜಲಾಶಯಗಳು ಬತ್ತಿಹೋಗಿರುತ್ತವೆ. ಕಾರಣ, ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯ ತೀರ್ಮಾನಕ್ಕೆ ಮಂಡಿಸಲಾಯಿತು. | ವಿಷಯದ ಬಗ್ಗೆ ಸಮಗ್ರವಾಗಿ ಚರ್ಚಿಸಿದ ನಂತರ, ಪ್ರಸಕ್ತ ಸಾಲಿನಲ್ಲಿ ಹಾಸನ ಜಿಲ್ಲೆಗೆ ಮಳೆಯ ಪ್ರಮಾಣ ತೀವ್ರವಾಗಿ ಕುಂಠಿತವಾಗಿರುವುದರಿಂದ, ಕೇವಲ ಶೇಕಡ 10ರಿಂದ 20ರ ಪ್ರಮಾಣದಲ್ಲಿ ಮಳೆಯಾಗಿದ್ದು, ಜಿಲ್ಲೆಯಲ್ಲಿರುವ ಎಲ್ಲಾ ಜಲಾಶಯಗಳು ಬತ್ತಿಹೋಗಿರುವ ಕಾರಣ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| 11 | ಯಗಚಿ ಜಲಾಶಯದಲ್ಲಿ ಮೀನುಗಾರಿಕೆ ನಡೆಸಲು ಪರವಾನಿಗೆಯನ್ನು ಕೊಡಿಸಿ ಕೊಡುವ ಬಗ್ಗೆ. | ಯಗಚಿ ಮೀನುಗಾರರ ಒಕ್ಕೂಟ, ಬೇಲೂರು ಇವರು ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಹಾಸನ ಇವರಿಗೆ ಮನವಿಯನ್ನು ಸಲ್ಲಿಸಿ, ಬೇಲೂರು ತಾಲ್ಲೂಕು, ಯಗಚಿ ಜಲಾಶಯದಲ್ಲಿ ಸುಮಾರು 100ರಿಂದ 125 ಕುಟುಂಬಗಳು ಬಹಳ ಹಿಂದಿನಿಂದಲೂ ಮೀನುಗಾರಿಕೆಯನ್ನು ಪ್ರಮುಖ ವೃತ್ತಿಯಾಗಿ ಕೈಗೊಂಡು ಜೀವನ ನಿರ್ವಹಣೆ ಮಾಡುತ್ತಿರುತ್ತಾರೆ. ಪ್ರಸ್ತುತ ಯಗಚಿ ಜಲಾಶಯದಲ್ಲಿ ಮೀನುಗಾರಿಕೆಯನ್ನು ಕುಟುಂಬದವರು ಅಂದರೆ ನಾರಾಯಣಪುರ, ಬೆಣ್ಣೂರು, ಯರೇಹಳ್ಳಿ, ಕರಗಡ, ಇ.ಹೊಸಹಳ್ಳಿ, ಶೆಟ್ಟಿಗೆರೆ, ಹಾಗೂ ಬೇಲೂರು ಟೌನ್ ಮೀನುಗಾರ ಕುಟುಂಬ ವರ್ಗದವರು ತಮ್ಮ ಮೀನುಗಾರಿಕೆ ಇಲಾಖೆಯಿಂದ ಸಮರ್ಪಕವಾದ ಪರವಾನಿಗೆಯನ್ನು ಪಡೆದುಕೊಂಡು ಮೀನು ಶಿಕಾರಿ ಮಾಡಿಕೊಂಡಿದ್ದು, ಪ್ರಸಕ್ತ ವರ್ಷದಲ್ಲಿ ಮಹಾ ಮಂಡಳಿಗೆ ವಹಿಸಿರುವುದರಿಂದ, ನಮ್ಮ ಬದುಕು ಬಹಳ ದುಸ್ತರವಾಗಿ ಸ್ಥಳೀಯ ಮೀನುಗಾರರಾದ ನಮಗೆ ಅನಾನುಕೂಲವಾಗಿವುದರಿಂದ, ದಯಮಾಡಿ ತಾವುಗಳು ವಿಷಯವನ್ನು ಪರಾಂಬರಿಸಿ ಮೇಲಿನ 100 ರಿಂದ 125 ಕುಟುಂಬದವರಿಗೆ ಮೀನು ಮರಿ ಶಿಕಾರಿ ನಡೆಸಲು ಜೀವನೋಪಾಯ ಮಾಡಿಕೊಳ್ಳಲು ಪರವಾನಿಗೆ ನೀಡಬೇಕಾಗಿ ಮತ್ತು ಮಹಾ ಮಂಡಳಿಗೆ ನೀಡಿರುವ ಆದೇಶವನ್ನು ಹಿಂಪಡೆಯಬೇಕಾಗಿ ಕೋರಿದ್ದು, ವಿಷಯವನ್ನು ಸಭೆಯ ಪರಿಶೀಲನೆಗೆ ಮಂಡಿಸಲಾಯಿತು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಿದ ನಂತರ, ಬೇಲೂರು ತಾಲ್ಲೂಕು ಯಗಚಿ ಜಲಾಶಯದಲ್ಲಿ ಮೀನುಗಾರಿಕೆ ಮಾಡಿಕೊಂಡು ಜೀವನೋಪಾಯ ಮಾಡಿಕೊಂಡಿರುವ ಸುಮಾರು 100 ರಿಂದ 125 ಕುಟುಂಬಗಳಿಗೆ ಪರವಾನಿಗೆಯನ್ನು ನೀಡುವಂತೆ ಮತ್ತು ಮೀನುಗಾರಿಕೆಯನ್ನು ಮಾಡಲು ಮಹಾ ಮಂಡಳಿಗೆ ನೀಡಿರುವ ಆದೇಶವನ್ನು ಹಿಂಪಡೆಯುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 12 | ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ. | ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಕ್ಷೀಣಿಸುತ್ತಿದ್ದು, ಕುಡಿಯುವ ನೀರಿನ ಯೋಜನೆಗಳಿಗೆ ಪೂರಕವಾಗಿ ಕಟ್ಟೆ, ಗೋಕಟ್ಟೆ, ಕಡಿಮೆ ವೆಚ್ಚದ ಬಾಂದಾರಗಳನ್ನು ನಿರ್ಮಿಸಿ ಅಂತರ್ಜಲ ವೃದ್ಧಿಸಲು ಅನುಕೂಲವಾಗುವಂತೆ, 2010-11ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 4215 ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ರೂ.400.00ಲಕ್ಷಗಳಿಗೆ ಕ್ರಿಯಾ ಯೋಜನೆಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸುವ ಬಗ್ಗೆ ವಿಷಯವನ್ನು ಸಭೆಯಲ್ಲಿ ಮಂಡಿಸಲಾಯಿತು. | ಸಭೆಯಲ್ಲಿ ವಿಷಯದ ಬಗ್ಗೆ ಸಮಗ್ರವಾಗಿ ಪರಿಶೀಲಿಸಲಾಯಿತು.<br>ಅಂತರ್ಜಲ ವೃದ್ಧಿಗೆ ಅನುಕೂಲವಾಗುವಂತೆ 2010-11ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 4215 ಅಂತರ್ಜಲ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ರೂ.400.00(ರೂಪಾಯಿ ನಾಲ್ಕು ನೂರು ಲಕ್ಷಗಳು ಮಾತ್ರ) ಗಳಿಗೆ ಕ್ರಿಯಾ ಯೋಜನೆಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

ಅಧ್ಯಕ್ಷರು
ಜಿಲ್ಲಾ ಪಂಚಾಯತ್, ಹಾಸನ

| | | | |
|---|---|---|---|
| 12 | ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಕ್ರೀಡಾದಿನಾಚರಣೆಗೆ ಸಹಾಧನ ನೀಡುವ ಬಗ್ಗೆ | ಅಧ್ಯಕ್ಷರು, ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ(ರಿ), ಹಾಸನ ಇವರು ಮನವಿಯನ್ನು ಸಲ್ಲಿಸಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಪ್ರತಿವರ್ಷದಂತೆ ಈ ವರ್ಷವೂ ಪತ್ರಿಕಾ ದಿನಾಚರಣೆ ಹಾಗೂ ಕ್ರೀಡಾ ದಿನಾಚರಣೆಯನ್ನು ಹಮ್ಮಿಕೊಂಡಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ರೂ.25000/-ಗಳ ಸಹಾಯಧನವನ್ನು ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿವರವಾಗಿ ಚರ್ಚಿಸಲಾಯಿತು. ಅಧ್ಯಕ್ಷರು, ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ(ರಿ), ಹಾಸನ ಇವರು ಕೋರಿರುವಂತೆ, ಪತ್ರಿಕಾ ದಿನಾಚರಣೆ ಹಾಗೂ ಕ್ರೀಡಾ ದಿನಾಚರಣೆಯನ್ನು ಆಚರಿಸಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ. 10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 13 | ಸ್ವತಂತ್ರ ದಿನಾಚರಣೆ ಅಂಗವಾಗಿ ಸಹಾಯಧನ ನೀಡುವ ಬಗ್ಗೆ | ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರು ಸಭೆಯಲ್ಲಿ ಸ್ವತಂತ್ರ ದಿನಾಚರಣೆ ಅಂಗವಾಗಿ ಜಿಲ್ಲಾ ಸಭಾಂಗಣದಲ್ಲಿ ನಡೆಯುವ ಸಮಾರಂಭದಲ್ಲಿ ಸುಮಾರು 4000 ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆ ಇದ್ದು, ಎಲ್ಲಾ ಶಾಲಾ ವಿದ್ಯಾರ್ಥಿಗಳಿಗೆ ಸಿಹಿ ಹಮಚುವ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯಿತಿಯಿಂದ ಹಮ್ಮಿಕೊಳ್ಳಬೇಕೆಂದು ಮಾನ್ಯ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ ಇವರು ಕೋರಿರುತ್ತಾರೆ ಎಂದು ಸಭೆಯ ಗಮನಕ್ಕೆ ತಂದರು ಹಾಗೂ ಸುಮಾರು 4000 ವಿದ್ಯಾರ್ಥಿಗಳಿಗೆ ಸಿಹಿ ಹಂಚಲು ಅಂದಾಜು ರೂ.12000/- ವೆಚ್ಚವಾಗಬಹುದೆಂದು ತಿಳಿದುಬಂದಿರುವುದರಿಂದ, ಸದರಿ ವೆಚ್ಚವನ್ನು ನೀಡಲು ಅನುಮತಿ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಲಾಯಿತು. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರು ತಿಳಿಸಿರುವಂತೆ, ಸ್ವಾತ್ರಂತ್ಯ ದಿನಾಚರಣೆ ಅಂಗವಾಗಿ ಶಾಲಾ ವಿದ್ಯಾರ್ಥಿಗಳಿಗೆ ಸಿಹಿ ಹಂಚಲು ಜಿಲ್ಲಾ ಪಂಚಾಯಿತಿ ವತಿಯಿಂದ ರೂ.12000/-(ರೂಪಾಯಿ ಹನ್ನೆರಡು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| | | ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಕಾಮಾಕ್ಷಿರಾಜು),
ಅಧ್ಯಕ್ಷರು,
ಜಿಲ್ಲಾ ಪಂಚಾಯತ್, ಹಾಸನ.